**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಅಡಗೂರು ಹೆಚ್. ವಿಶ್ವನಾಥ್, ಶ್ರೀ. ಪುಟ್ಟಣ್ಣ ಹಾಗೂ ಶ್ರೀ. ಹೆಚ್.ಪಿ. ಸುಧಾಮ್ ದಾಸ್ ಇವರುಗಳು ನಿಯಮ-330 ರಡಿ ನೀಡಿರುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನ ಡ ಮತ್ತು ಸಂಸ್ಕೃತಿ ಸಚಿವರ ಉತ್ತರ**

54

**ಸೂಚನೆ**

ನಾಡಿನ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ಮತ್ತು ಪ್ರಸ್ತುತ ಅಧ್ಯಕ್ಷರು ತಮಗಿಲ್ಲದ ಅಧಿಕಾರವನ್ನು ಪಡೆಯಲು ಕನ್ನಡ ಸಾಹಿತ್ಯ ಪರಿಷತ್ತಿನ ಬೈಲಾವನ್ನು ತಿದ್ದುಪಡಿ ಮಾಡಿರುವುದು ಮತ್ತು ಮಂಡ್ಯದಲ್ಲಿ ನಡೆದ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ನಡೆದಿರುವ ಅವ್ಯವಹಾರ (ಮುಂತಾಗಿ) ಚರ್ಚಿಸಲು ಕೋರುತ್ತೇನೆ.

**ಉತ್ತರ**

ಕನ್ನಡ ಸಾಹಿತ್ಯ ಪರಿಷತ್ತಿನ ಉಪನಿಯಮ ತಿದ್ದುಪಡಿಯ ಬಗ್ಗೆ ದಿನಾಂಕ:01.05.2022ರಂದು ಶ್ರೀ ಕನಕ ಕಲಾಭವನ, ಕಾಗಿನೆಲೆ, ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ ಇಲ್ಲಿ ನಡೆದ ವಿಶೇಷ ಸರ್ವಸದಸ್ಯರ ಸಭೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನಿಯಮಗಳ ತಿದ್ದುಪಡಿಗಳನ್ನು ಅನುಮೋದಿಸಲಾಗಿರುತ್ತದೆ. ದಿನಾಂಕ:24.05.2022 ರಲ್ಲಿ ಇಲಾಖೆಗೆ ನಿಯಮ, ನಿಬಂಧನೆಗಳ ತಿದ್ದುಪಡಿಯ ಬಗ್ಗೆ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ನೋಂದಣಾಧಿಕಾರಿಗಳು, 2ನೇ ವಲಯ, ಬೆಂಗಳೂರು ಇವರಿಗೆ ಸಲ್ಲಿಸಿರುತ್ತಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಉದ್ದೇಶಿತ ತಿದ್ದುಪಡಿಗಳನ್ನು ಪರಿಷತ್ತಿನ ಸದಸ್ಯರು ಪ್ರಶ್ನಿಸಿ ಓ.ಎಸ್.ನಂ.3029/2022 ರಂತೆ ಮಾನ್ಯ ಅಡಿಷನಲ್ ಸಿಟಿ ಸಿವಿಲ್ ಸೆಷನ್ ನ್ಯಾಯಾಲಯದಲ್ಲಿ ದಾವೆ ದಾಖಲಿಸಲಾಗಿರುತ್ತದೆ. ದಿನಾಂಕ 30.04.2022 ರಲ್ಲಿ ಮಾನ್ಯ ಅಡಿಷನಲ್ ಸಿಟಿ ಸಿವಿಲ್ ಸೆಷನ್ ನ್ಯಾಯಾಲಯವು ಮಧ್ಯಂತರ ಆದೇಶದಲ್ಲಿ "I am of the opinion that the decision taken in the meeting is subject to the result of the suit" ಎಂದು ಆದೇಶಿಸಿರುತ್ತದೆ. ಕನ್ನಡ ಸಾಹಿತ್ಯ ಪರಿಷತ್ತಿನ ನಿಯಮ, ನಿಬಂಧನೆಗಳ ತಿದ್ದುಪಡಿಯನ್ನು ದಿನಾಂಕ:30.06.2022 ರಲ್ಲಿ ಸಿಟಿ ಸಿವಿಲ್ ಸೆಷನ್ ಬೆಂಗಳೂರು ನ್ಯಾಯಾಲಯದಲ್ಲಿರುವ ಓ.ಎಸ್.3029/2022ರ ಅಂತಿಮ ತೀರ್ಪಿಗೆ ಒಳಪಟ್ಟು ಜಿಲ್ಲಾ ನೋಂದಣಾಧಿಕಾರಿಗಳು ಅನುಮೋದಿಸಿರುತ್ತಾರೆ.

ದಿನಾಂಕ:03.09.2023 ರಂದು ಹಾಸನ ಜಿಲ್ಲೆ, ಬೇಲೂರು ತಾಲ್ಲೂಕಿನ ಪುಷ್ಪಗಿರಿ ಮಠದಲ್ಲಿ ವಿಶೇಷ ಸಾಮಾನ್ಯ ಸಭೆಯಲ್ಲಿ ಸಂಘದ ಧ್ಯೇಯೋದ್ದೇಶಗಳು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡುವ ಬಗ್ಗೆ ನಿರ್ಣಯಿಸಲಾಗಿರುತ್ತದೆ. ದಿನಾಂಕ:03.09.2023 ರ ವಿಶೇಷ ಸಾಮಾನ್ಯ ಸಭೆಯಲ್ಲಿ ಅನುಮೋದನೆಗೊಂಡ ತಿದ್ದುಪಡಿಯ ಪ್ರಸ್ತಾವನೆಯನ್ನು ದಿನಾಂಕ:26.09.2023 ರಲ್ಲಿ ಸಹಕಾರ ಇಲಾಖೆಗೆ ಸಲ್ಲಿಸಿದ್ದು, ಸದರಿ ತಿದ್ದುಪಡಿ ಪ್ರಸ್ತಾವನೆಯನ್ನು ದಿನಾಂಕ:31.10.2023 ರಂದು ಸಹಕಾರ ಇಲಾಖೆಯು ಅನುಮೋದಿಸಿರುತ್ತದೆ. ಕನ್ನಡ ಸಾಹಿತ್ಯ ಪರಿಷತ್ತು ಮೇಲ್ಕಂಡಂತೆ ಎರಡು ಬಾರಿ ಉಪನಿಯಮಗಳ ತಿದ್ದುಪಡಿ ಮಾಡಿರುತ್ತದೆ.

ಕನ್ನಡ ಸಾಹಿತ್ಯ ಪರಿಷತ್ತು ಈ ಸಂಘದ 108ನೇ ಹಾಗೂ 2023-24ನೇ ಸಾಲಿನ ವಾರ್ಷಿಕ ಸರ್ವಸದಸ್ಯರ ಸಭೆಯನ್ನು ದಿನಾಂಕ:29.06.2025 ರ ಭಾನುವಾರದಂದು ಬಳ್ಳಾರಿ ಜಿಲ್ಲೆಯ ಸಂಡೂರಿನ ಕೂಡ್ಲಗಿ ರಸ್ತೆಯಲ್ಲಿ ಆದರ್ಶ ಕಲ್ಯಾಣ ಮಂಟಪದಲ್ಲಿ ಕರೆದಿರುತ್ತಾರೆ. ಆದರೆ ಸಂಘದ ಅಜೀವ ಸದಸ್ಯರಿಗೆ ಆಹ್ವಾನಪತ್ರಿಕೆ ಕಳುಹಿಸಿರುವುದಿಲ್ಲ. ಆದ್ದರಿಂದ, ಸಂಘದ ಸದಸ್ಯರು ವಿವಿಧ ದಿನಾಂಕಗಳಂದು ಸಂಘದ ಸರ್ವಸದಸ್ಯರ ಸಭೆಯನ್ನು ದೂರದ ಬಳ್ಳಾರಿ ಗ್ರಾಮದಲ್ಲಿ ನಡೆಸಿ ಸಂಘದ ಲೆಕ್ಕಪತ್ರಗಳ ಮಂಡನೆಯನ್ನು ವಾಮಮಾರ್ಗದ ಮೂಲಕ ಅನುಮೋದಿಸಿಕೊಳ್ಳಲು ಸಂಘದ ಅಧ್ಯಕ್ಷರು ಪ್ರಯತ್ನಿಸುತ್ತಿದ್ದಾರೆ ಎಂದು ದೂರು ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಸದರಿ ದೂರು ಅರ್ಜಿಗಳನ್ನು ಪರಿಶೀಲಿಸಲಾಗಿ ಪೊಲೀಸ್ ಇನ್ಸ್ ಪೆಕ್ಟರ್, ಸಂಡೂರು ಪೊಲೀಸ್ ಠಾಣೆ ಇವರು ಕನ್ನಡ ಸಾಹಿತ್ಯ ಪರಿಷತ್ತು ನಿಗದಿಪಡಿಸಿರುವ ವಾರ್ಷಿಕ

ಸರ್ವಸದಸ್ಯರ ಸಭೆಯ ಸ್ಥಳವು ಸಭೆಯನ್ನು ನಡೆಸಲು ಯೋಗ್ಯವಾದ ಸ್ಥಳವಾಗಿರುವುದಿಲ್ಲ ಎಂದು ದಿನಾಂಕ:25.06.2025 ರ ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ. ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ:29.06.2025 ರ ಭಾನುವಾರದಂದು ಬಳ್ಳಾರಿ ಜಿಲ್ಲೆಯ ಸಂಡೂರಿನ ಕೂಡ್ಲಗಿ ರಸ್ತೆಯಲ್ಲಿಆದರ್ಶ ಕಲ್ಯಾಣ ಮಂಟಪದಲ್ಲಿ ಕರೆದಿದ್ದ ವಾರ್ಷಿಕ ಸರ್ವಸದಸ್ಯರ ಸಭೆಯನ್ನು ರದ್ದುಪಡಿಸಿ ಎಲ್ಲಾ ಸದಸ್ಯರಿಗೆ ಅನುಕೂಲವಾಗುವ ಹಾಗೂ ಎಲ್ಲಾ ರೀತಿಯ ಸೌಲಭ್ಯ ಹೊಂದಿರುವ ಸ್ಥಳದಲ್ಲಿ ಆಯೋಜಿಸುವಂತೆ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಉಪ ನಿಬಂಧಕರು, 2ನೇ ವಲಯ, ಬೆಂಗಳೂರು ಇವರ ದಿನಾಂಕ:27.06.2025 ರ ಆದೇಶದಲ್ಲಿ ಸಂಘಕ್ಕೆ ನಿರ್ದೇಶಿಸಲಾಗಿರುತ್ತದೆ.

ಕನ್ನಡ ಸಾಹಿತ್ಯ ಪರಿಷತ್ತು ದಿನಾಂಕ:27.06.2025ರಲ್ಲಿ ಸಂಘದ ಮಹಾಸಭೆಯನ್ನು ಮುಂದೂಡಿರುವ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:20919/2025 ನ್ನು ದಾಖಲಿಸಿರುತ್ತಾರೆ. ದಿನಾಂಕ:25.07.2025 ರ ಮಧ್ಯಂತರ ಆದೇಶದಲ್ಲಿ ವಾರ್ಷಿಕ ಸರ್ವಸದಸ್ಯರ ಸಭೆಗೆ ಸಂಬಂಧಿಸಿದಂತೆ "It may be appropriate at this stage to clarify that the petitioner - Society would be entitled to hold their Annual General Body Meeting in terms of their bye-law while observing that other issues which are concerns expressed by its members, may be taken note of appropriately as far as practicable in the discretion of the petitioner - Society", ಎಂದು ಆದೇಶಿಸಿರುತ್ತದೆ.

ವಿವಿಧ ದಿನಾಂಕಗಳಂದು ಸಂಘದ ಸದಸ್ಯರುಗಳು ಸಹಕಾರ ಇಲಾಖೆಗೆ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿನ ಹಣದುರುಪಯೋಗ ಮತ್ತು ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ದೂರು ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಸದರಿ ದೂರು ಅರ್ಜಿಗಳ ಬಗ್ಗೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಪ್ರಕರಣ 25 ರಡಿ ಒಟ್ಟು 17 ಅಂಶಗಳ ಕುರಿತು ವಿಚಾರಣೆ ನಡೆಸಲು ದಿನಾಂಕ:30.06.2025 ರ ಆದೇಶದಲ್ಲಿ ಶ್ರೀ ಪಿ. ಶಶಿಧರ್, ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ವಿಚಾರಣಾಂಶಗಳು ಈ ಕೆಳಕಂಡಂತಿದೆ.

1) ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಪ್ರಕರಣ 9 ಮತ್ತು 10 ರನ್ವಯ 2022-23 ರಿಂದ ಇದುವರೆವಿಗೂ ಅನುಮೋದಿಸಿರುವ ತಿದ್ದುಪಡಿಯ ಬಗ್ಗೆ ಪರಿಶೀಲಿಸುವುದು.

2) ಸಂಘದ ನಿಯಮ-ನಿಬಂಧನೆಯ ಪ್ರಕಾರ ಆಯ್ಕೆಗೊಂಡಿರುವ ಆಡಳಿತ ಮಂಡಳಿ ಪದಾಧಿಕಾರಿಗಳಿಗೆ ಮತ್ತು ಜಿಲ್ಲಾ ಪದಾಧಿಕಾರಿಗಳಿಗೆ ನಿಯಮ ಬಾಹಿರವಾಗಿ ಹಾಲಿ ಅಧ್ಯಕ್ಷರು ನೋಟೀಸ್ ಜಾರಿ ಮಾಡುತ್ತಿರುವ ಬಗ್ಗೆ ಪರಿಶೀಲಿಸುವುದು.

3) 2022-23ನೇ ಸಾಲಿನಿಂದ ಇದುವರೆವಿಗೂ ಸಂಘಕ್ಕೆ ಸರ್ಕಾರ ಮತ್ತು ಇತರೆ ಮೂಲಗಳಿಂದ ಸಂಗ್ರಹವಾಗಿರುವ ಅನುದಾನವನ್ನು ಪಾರದರ್ಶಕವಾಗಿ ನಿರ್ವಹಿಸದೇ ಹಣ ದುರುಪಯೋಗ ಮಾಡಿರುವ ಬಗ್ಗೆ ಪರಿಶೀಲಿಸುವುದು.

4) 2022-23ನೇ ಸಾಲಿನಿಂದ ಇದುವರೆವಿಗೂ ವಿವಿಧ ಕಾರ್ಯಕ್ರಮಗಳಿಗಾಗಿ ಸಂಘವು ಜಿಲ್ಲಾ ಸಂಘಗಳಿಗೆ, ತಾಲ್ಲೂಕು ಸಂಘಗಳಿಗೆ ಮತ್ತು ಇತರೆ ಸಂಘ ಸಂಸ್ಥೆಗಳಿಗೆ ನೀಡಿರುವ ಅನುದಾನವನ್ನು ಪಾರದರ್ಶಕವಾಗಿ ನಿರ್ವಹಿಸದೇ ಹಣದುರುಪಯೋಗ ಮಾಡಿರುವ ಬಗ್ಗೆ ಪರಿಶೀಲಿಸುವುದು.

5) 2022-23ನೇ ಸಾಲಿನಿಂದ ಇದುವರೆವಿಗೂ ಸಂಘದವರು ವಾಹನಗಳನ್ನು ಖರೀದಿಸಿರುವ ಮತ್ತು ಮಾರಾಟ ಮಾಡುವಲ್ಲಿ ಮಾಡಿರುವ ಹಣದುರುಪಯೋಗದ ಬಗ್ಗೆ ಪರಿಶೀಲಿಸುವುದು.

೬) 2022-23ನೇ ಸಾಲಿನಿಂದ ಇದುವರೆವಿಗೂ ಸಂಘದ ಕಟ್ಟಡ ನಿರ್ಮಾಣ ಮತ್ತು ನವೀಕರಣದಲ್ಲಿನ ಹಣ ದುರುಪಯೋಗ ಮಾಡಿರುವ ಬಗ್ಗೆ ಪರಿಶೀಲಿಸುವುದು.

7) ಸಂಘದ ಕಂಪ್ಯೂಟರ್ ಖರೀದಿ, ಸಿಸಿ ಕ್ಯಾಮೆರಾ ಅಳವಡಿಕೆ, ಅಗ್ನಿಶಾಮಕ ಉಪಕರಣದ ಅಳವಡಿಕೆ, ಪುಸ್ತಕಗಳ ಮುದ್ರಣಗಳಿಗೆ ಸಂಬಂಧಿಸಿದ ಹಣದುರುಪಯೋಗದ ಬಗ್ಗೆ ಪರಿಶೀಲಿಸುವುದು.

8) ಸಂಘದ ಹಾವೇರಿ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಲೆಕ್ಕಪತ್ರಗಳನ್ನು ಸಲ್ಲಿಸದೇ ಹಣದುರುಪಯೋಗ ಮಾಡಿರುವ ಬಗ್ಗೆ ಪರಿಶೀಲಿಸುವುದು.

9) ಕರ್ನಾಟಕ ರಾಜ್ಯ ಲೆಕ್ಕಪರಿಶೋಧನಾ ಇಲಾಖೆ ರವರು ಆಡಿಟ್ ವರದಿಯಲ್ಲಿ ಆಕ್ಷೇಪಿಸಿರುವ ಅಂಶಗಳಿಗೆ ಅನುಪಾಲನಾ ವರದಿ ಸಲ್ಲಿಸದೆ ಇರುವ ಬಗ್ಗೆ ಪರಿಶೀಲಿಸುವುದು.

10) ಸಂಘದ ಆಡಳಿತ ಮಂಡಳಿ ನಿರ್ಣಯಗಳನ್ನು ಸಂಘದ ನಿಯಮ - ನಿಬಂಧನೆಗೆ ವಿರುದ್ಧವಾಗಿ ತಮ್ಮ ಇಚ್ಛಾನುಸಾರ ದಾಖಲಿಸಿರುವ ಬಗ್ಗೆ ಪರಿಶೀಲಿಸುವುದು.

11) ಸಂಘದ ಹಣವನ್ನು ಅಧ್ಯಕ್ಷರ ಕುಟುಂಬ ಸದಸ್ಯರ ಕಾರ್ಯಕ್ರಮಗಳಿಗೆ ನಿಯಮಬಾಹಿರವಾಗಿ ಹಣ ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಪರಿಶೀಲಿಸುವುದು.

12) ಸಂಘದ ಗುರುತಿನ ಚೀಟಿಯ (ಸ್ಮಾರ್ಟ್ ಕಾರ್ಡ್)ನ್ನು ನೀಡುವಲ್ಲಿ ಆಗಿರುವ ಹಣದುರುಪಯೋಗದ ಬಗ್ಗೆ ಪರಿಶೀಲಿಸುವುದು.

13) 2022-23ನೇ ಸಾಲಿನಿಂದ ಇದುವರೆವಿಗೂ ಸಂಘದಲ್ಲಿನ ಸಿಬ್ಬಂದಿ ನೇಮಕಾತಿ ನಿಯಮಬದ್ಧವಾಗಿನಡೆದಿರುವ ಬಗ್ಗೆ ಪರಿಶೀಲಿಸುವುದು.

14) 2022-23ನೇ ಸಾಲಿನಿಂದ ಇದುವರೆವಿಗೂ ಸಂಘದವರು ನಿಯಮ ಬಾಹಿರವಾಗಿ ವಿದೇಶ ಪ್ರವಾಸ ಕೈಗೊಂಡು ಹಣದುರುಪಯೋಗ ಮತ್ತು ನಷ್ಟಮಾಡಿರುವ ಬಗ್ಗೆ ಪರಿಶೀಲಿಸುವುದು.

15) 2022-23ನೇ ಸಾಲಿನಿಂದ ಇದುವರೆವಿಗೂ ಸಂಘದಲ್ಲಿ ಸಂಗ್ರಹವಾಗಿರುವ ಸಿ.ಎಸ್.ಆರ್ ಫಂಡ್ ಹಣ ದುರುಪಯೋಗದ ಬಗ್ಗೆ ಪರಿಶೀಲಿಸುವುದು.

16) ಸಂಘವು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಪ್ರಕರಣ 11ರಡಿ ಪ್ರತಿ ವರ್ಷ ನಡೆಸಿರುವ ವಾರ್ಷಿಕ ಸರ್ವಸದಸ್ಯರ ಬಗ್ಗೆ ಪರಿಶೀಲಿಸುವುದು.

17) ಸಂಘವು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಪ್ರಕರಣ 13ರಡಿ ಪ್ರತಿ ವರ್ಷ ವಾರ್ಷಿಕ ಸರ್ವಸದಸ್ಯರ ಸಭೆಯ ನಂತರ ದಾಖಲಾತಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿ ಸ್ವೀಕೃತಿ ಪಡೆದಿರುವ ಬಗ್ಗೆ ಪರಿಶೀಲಿಸುವುದು.

ಕನ್ನಡ ಸಾಹಿತ್ಯ ಪರಿಷತ್ತು ದಿನಾಂಕ:30.06.2025 ರ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ಕಲಂ 25 ರ ವಿಚಾರಣಾ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:20919/2025 ನ್ನು ದಾಖಲಿಸಿ ಕಲಂ 25 ರ ವಿಚಾರಣೆಗೆ ತಡೆಯಾಜ್ಞೆ ನೀಡುವಂತೆ ಕೋರಿರುತ್ತಾರೆ. ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯವು ದಿನಾಂಕ:25.07.2025 ರ ಮಧ್ಯಂತರ ಆದೇಶದಲ್ಲಿ ""The enquiry proceedings would be subject to orders to be passed by this court" ಎಂದು ಆದೇಶಿಸಿದ್ದು, ವಿಚಾರಣೆಗೆ ತಡೆಯಾಜ್ಞೆ ನೀಡಿರುವುದಿಲ್ಲ.

ಕಲಂ 25 ರ ವಿಚಾರಣೆಯು ಪ್ರಗತಿಯಲ್ಲಿದ್ದು, ವಿಚಾರಣಾಧಿಕಾರಿಯವರು ವಿಚಾರಣೆಯನ್ನು ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸಿದ ನಂತರ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರಡಿ ಸಹಕಾರ ಇಲಾಖೆಯು ಮುಂದಿನ ಕಾನೂನು ಕ್ರಮ ಕೈಗೊಳ್ಳುತ್ತದೆ.

ಮುಂದುವರೆದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನವನ್ನು ಮಂಡ್ಯ ಜಿಲ್ಲೆಯಲ್ಲಿ ಆಯೋಜಿಸಲು ಸರ್ಕಾರದ ಆದೇಶ ಸಂಖ್ಯೆ: ಕಸಂವಾ 265 ಕಸಧ 2024, ದಿನಾಂಕ:07.11.2024ರಲ್ಲಿ ರೂ.10.00 ಕೋಟಿಗಳು, ಸಮಸಂಖ್ಯೆಯ ಆದೇಶದ ದಿನಾಂಕ:14.11.2024ರಲ್ಲಿ ರೂ.15.00 ಕೋಟಿಗಳು ಹಾಗೂ ಸಮಸಂಖ್ಯೆಯ ಆದೇಶದ ದಿನಾಂಕ:25.02.2025ರಲ್ಲಿ ರೂ.5.00 ಕೋಟಿಗಳು ಸೇರಿದಂತೆ ಒಟ್ಟಾರೆ ರೂ.30.00 ಕೋಟಿಗಳನ್ನು ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಆದರೆ, ಮಂಡ್ಯದಲ್ಲಿ ನಡೆದ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಅವ್ಯವಹಾರ ನಡೆಸಲಾಗಿದೆ ಎಂದು ದೂರುಗಳು ಸ್ವೀಕೃತವಾದ ಹಿನ್ನಲೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರ ವಿರುದ್ಧ ಬಂದಿರುವ ದೂರುಗಳಿಗೆ ಸಂಬಂಧಿಸಿದಂತೆ ಸಮಗ್ರ ತನಿಖೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ:ಕಸಂವಾ 56 ಕಸನಿ ಆಕ 2025, ದಿನಾಂಕ:23.07.2025 ರಲ್ಲಿ 06 ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದ್ದು, ವಿಚಾರಣೆಯು ಪ್ರಗತಿಯಲ್ಲಿರುತ್ತದೆ.

ಸಂಖ್ಯೆ:ಕಸಂವಾ 73 ಕಸನಿ ಆಕ 2025

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನ ಡ ಮತ್ತು ಸಂಸ್ಕೃತಿ ಸಚಿವರು